ಪ್ರಗತಿಯಲ್ಲಿರುತ್ತದೆ. ಸದರಿ ಭೂಮಿಯನ್ನು ಸಾರಿಗೆ ಸಂಸ್ಥೆಗೆ ಹಸ್ತಾಂತರಿಸಲು ಅಂತಿಮ ಅನುಮೋದನೆ ಕೋರಿ ಪ್ರಧಾನ ಮುಖ್ಯ ಅರಣ್ಯಾಧಿಕಾರಿಗಳು, ಭಾರತ ಸರ್ಕಾರ, ವಲಯ ಕಛೇರಿ(ದಕ್ಷಿಣ ವಲಯ) ಇವರಿಗೆ ಅರಣ್ಯ ಮತ್ತು ಪರಿಸರ ಇಲಾಖೆಯಿಂದ ಪತ್ರ ಬರೆಯಲಾಗಿದೆ.

ಈವರೆವಿಗೂ ಅರಣ್ಯ ನಿವೇಶನವು ಸಾರಿಗೆ ಸಂಸ್ಥೆಗೆ ಹಸ್ತಾಂತರವಾಗದೆ ಇರುವುದರಿಂದ ಬಸ್ ಘಟಕ ಸ್ಥಾಪಿಸುವ ಕಾಮಗಾರಿ ಪ್ರಾರಂಭವಾಗಿರುವುದಿಲ್ಲ.

ಆ) ಹೌದು.

ಇ) ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅರಣ್ಯ ಇಲಾಖೆಯಿಂದ ಭೂಮಿಯನ್ನು ಸಾರಿಗೆ ಸಂಸ್ಥೆಗೆ ಹಸ್ತಾಂತರಿಸಿದ ನಂತರ ಬಸ್ ಘಟಕ ನಿರ್ಮಾಣ ಕಾಮಗಾರಿ ಪ್ರಾರಂಭಿಸುವುದು.

ಹಾಸ್ಟೆಲ್‌ಗಳನ್ನು ಪ್ರಾರಂಭಿಸುವುದು

281 (3929), ಶ್ರೀ ವಡ್ನಾಳ್ ರಾಜಣ್ಣ (ಚನ್ನಗಿರಿ)

ಅ) ಚನ್ನಗಿರಿ ವಿಧಾನಸಭಾ ಕ್ಷೇತ್ರದಲ್ಲಿ ಬರುವ ಗೊಪ್ಪೇನಹಳ್ಳಿ ಪಾಂಡೋಮಟ್ಟಿ ಮಧ್ಯ ಹಿಂದುಳಿದ ವರ್ಗಗಳ ಹಾಸ್ಟೆಲ್ ಪ್ರಾರಂಭಿಸಲಾಗುವುದೇ;

ಆ) ಹಾಗಾದರೆ, ಯಾವಾಗ ಪ್ರಾರಂಭ ಮಾಡಲಾಗುವುದು?

ಶ್ರೀ ಹೆಚ್.ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ಇಲ್ಲ

ಆ) ಗೊಪ್ಪೇನಹಳ್ಳಿಗೆ ಮೆಟ್ರಿಕ್–ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಮಂಜೂರು ಮಾಡುವ ಬಗ್ಗೆ ಕೋರಿಕೆ ಇದ್ದು, ಪ್ರಸಕ್ತ ಸಾಲಿನಲ್ಲಿ ಯಾವುದೇ ಮೆಟ್ರಿಕ್–ಪೂರ್ವ ವಿದ್ಯಾರ್ಥಿ ನಿಲಯಗಳನ್ನು

ಹೊಸದಾಗಿ ಮಂಜೂರು ಮಾಡಲಾಗುವುದಿಲ್ಲವಾದ್ದರಿಂದ ಈ ಪ್ರಸ್ತಾವನೆಯನ್ನು ಈ ಸಾಲಿನಲ್ಲಿ ಪರಿಗಣಿಸಲು ಸಾಧ್ಯವಿರುವುದಿಲ್ಲ.

ಉನ್ನತ ಶಿಕ್ಷಣ ಪಡೆದ ವೈದ್ಯರು ಸರ್ಕಾರಿ ಸೇವೆಯನ್ನು ತ್ಯಜಿಸುತ್ತಿರುವುದು

282 (3283), ಶ್ರೀ ಪಿಳ್ಳ ಮುನಿಶಾಮಪ್ಪ (ದೇವನಹಳ್ಳಿ)

ಅ) ಉನ್ನತ ಶಿಕ್ಷಣಕ್ಕಾಗಿ ವೈದ್ಯರು ಸರ್ಕಾರದ ಸವಲತ್ತುಗಳನ್ನು ಪಡೆದು ತದನಂತರ ಸರ್ಕಾರಿ ಸೇವೆಯನ್ನು ತ್ಯಜಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ;

ಆ) ಸರ್ಕಾರಿ ಸೇವೆಯಲ್ಲಿರುವ ವೈದ್ಯರು ಖಾಸಗಿ ಆಸ್ಪತ್ರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದು ಹಾಗೂ ಸ್ವಂತ ನರ್ಸಿಂಗ್ ಹೋಮ್ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಇಂತಹ ವೈದ್ಯರುಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ (ವಿವರವನ್ನೊದಗಿಸುವುದು)?

ಶ್ರೀ ಯು.ಟಿ.ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ.

46 ಸೇವಾನಿರತ ವೈದ್ಯರುಗಳು ಸ್ನಾತಕೋತ್ತರ ವ್ಯಾಸಂಗದ ನಂತರ ಗೈರು ಹಾಜರಿಯಾಗಿರುತ್ತಾರೆ.

ಸರ್ಕಾರದ ನಿಯಮದ ಪ್ರಕಾರ ಸೇವಾನಿರತ ವೈದ್ಯರುಗಳು ಸ್ನಾತಕೋತ್ತರ ವ್ಯಾಸಂಗದ ನಂತರ 10 ವರ್ಷಗಳ ಕಾಲ ಇಲಾಖೆಯಲ್ಲಿ ಕಾರ್ಯನಿರ್ವಹಿಸಬೇಕೆಂಬ ನಿಯಮವಿದ್ದು, ನಿಯಮದಂತೆ ವ್ಯಾಸಂಗಕ್ಕೆ ತೆರಳುವ ಪೂರ್ವದಲ್ಲಿ ವ್ಯಾಸಂಗದ